ಮಾನ್ಯ ವಿಧಾನ ಪರಿಷತ್ ಸದಸ್ಯರಾದ ಶ್ರೀ ಕೆ. ಪ್ರತಾಪಸಿಂಹ ನಾಯಕ್ ಇವರು ಶೂನ್ಯ ವೇಳೆಯಲ್ಲಿ ಪ್ರಸ್ತಾಪಿಸಿರುವ ವಿಷಯಕ್ಕೆ ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಸಚಿವರ ಉತ್ತರ:

**ವಿಷಯ: "ರಾಜ್ಯದ ಅಂಗನವಾಡಿಗಳಿಗೆ ಎಂಟು ತಿಂಗಳಿನಿಂದ ಕೆನೆರಹಿತ ಹಾಲಿನ ಪುಡಿ ಸರಬರಾಜು ಬಂದ್ ಆಗಿದೆ. ಹೀಗಾಗಿ ಕಂದಮ್ಮಗಳ ಜೊತೆಗೆ ಮಾತೃಪೂರ್ಣ ಯೋಜನೆಯಡಿ ಬರುವ ಗರ್ಭಿಣಿಯರು ಮತ್ತು ಬಾಣಂತಿಯರು ಸಹ ಪೌಷ್ಟಿಕಾಂಶಯುಕ್ತ ಹಾಲಿನಿಂದ ವಂಚಿತರಾಗಿದ್ದಾರೆ. ರಾಜ್ಯದಲ್ಲಿ ಸುಮಾರು 67 ಸಾವಿರ ಅಂಗನವಾಡಿ ಕೇಂದ್ರಗಳಿಗೆ ಹಾಲಿನ ಪುಡಿ ವಿತರಣೆ ನಿಂತಿದ್ದರಿಂದ ಆರು ವರ್ಷದೊಳಗಿನ ಸುಮಾರು 36 ಲಕ್ಷ ಮಕ್ಕಳು ಹಾಗೂ ಸುಮಾರು 7.50 ಲಕ್ಷ ಗರ್ಭಿಣಿ / ಬಾಣಂತಿಯರು ಈ ಸೌಲಭ್ಯದಿಂದ ವಂಚಿತರಾಗಿದ್ದಾರೆ.**

**ನಾಲ್ಕು ವರ್ಷಗಳ ಹಿಂದೆ 25 ಕ್ಕೂ ಹೆಚ್ಚು ಕಾರ್ಯಕ್ರಮಗಳನ್ನು ಡಿಜಿಟಲೀಕರಣಗೊಳಿಸಬೇಕೆಂಬ ಉದ್ದೇಶದಿಂದ ಅಂಗನವಾಡಿ ಕಾರ್ಯಕರ್ತೆಯರಿಗೆ ನೀಡಿದ ಮೊಬೈಲ್‌ಗಳು ಈಗ ಉಪಯೋಗದ ಸಾಮರ್ಥ್ಯ ಕಳೆದುಕೊಂಡಿವೆ. ಹೀಗಿರುವಾಗ ಪ್ರತೀ ಕುಟುಂಬದ ಆರೋಗ್ಯದ ವಿವರಗಳನ್ನು ತ್ವರಿತವಾಗಿ ಸರ್ವೆ ಮಾಡುವಂತೆ ಅಂಗನವಾಡಿ ಕಾರ್ಯಕರ್ತೆಯರಿಗೆ ಸೂಚನೆ ನೀಡಿರುವುದು ಹಾಗೂ ಒತ್ತಡ ಹೇರುತ್ತಿರುವುದು ಅವರಿಗೆ ನಿಜಕ್ಕೂ ಸವಾಲಾಗಿ ಪರಿಣಮಿಸಿದೆ.**

**ಕೆನೆರಹಿತ ಹಾಲಿನ ಪುಡಿ ಸರಬರಾಜು ಬಂದ್ ಆಗಿರುವುದರಿಂದ ಮಕ್ಕಳು ಮತ್ತು ಗರ್ಭಿಣಿಯರು ಮತ್ತು ಬಾಣಂತಿಯರ ಮನೆಯವರು ಅಂಗನವಾಡಿ ಕಾರ್ಯಕರ್ತೆಯರನ್ನು ಪ್ರತಿನಿತ್ಯವೂ ಕೇಳುತ್ತಿರುವುದರಿಂದ ಹಾಗೂ ಕಳಪೆ ಮೊಬೈಲ್ ಗಳನ್ನು ನೀಡಿ ಅವುಗಳನ್ನೇ ಇಟ್ಟುಕೊಂಡು ಬೇಗ ಸಮೀಕ್ಷೆ ಮುಗಿಸುವಂತೆ ಮೇಲಧಿಕಾರಿಗಳು ಒತ್ತಡ ಹೇರುತ್ತಿರುವುದರಿಂದ ಅಂಗನವಾಡಿ ಕಾರ್ಯಕರ್ತೆಯರಿಗೆ ಆಗುತ್ತಿರುವ ಕಿರಿಕಿರಿ ಹಾಗೂ ಮಾನಸಿಕ ಒತ್ತಡವನ್ನು ಕೂಡಲೇ ಪರಿಹರಿಸಲು ಸೂಕ್ತ ಕ್ರಮ ಕೈಗೊಳ್ಳುವ ಬಗ್ಗೆ."**

**ಉತ್ತರ:**

ಸಮಗ್ರ ಶಿಶು ಅಭಿವೃದ್ಧಿ ಯೋಜನೆಯು ಕೇಂದ್ರ ಪುರಸ್ಕೃತ ಯೋಜನೆಯಾಗಿರುತ್ತದೆ. ಕರ್ನಾಟಕ ರಾಜ್ಯದಲ್ಲಿ, 2ನೇ ಅಕ್ಟೋಬರ್ 1975 ರಂದು ಪ್ರಾಯೋಗಿಕವಾಗಿ ಮೈಸೂರು ಜಿಲ್ಲೆಯ, ಟಿ. ನರಸೀಪುರ ತಾಲ್ಲೂಕಿನಲ್ಲಿ 100 ಅಂಗನವಾಡಿ ಕೇಂದ್ರಗಳೊಂದಿಗೆ ಸಮಗ್ರ ಶಿಶು ಅಭಿವೃದ್ಧಿ ಯೋಜನೆಯನ್ನು ಪ್ರಾರಂಭಿಸಲಾಯಿತು. ಈಗ ರಾಜ್ಯದ ಎಲ್ಲಾ ತಾಲ್ಲೂಕುಗಳಿಗೂ ವಿಸ್ತರಿಸಲಾಗಿದೆ. 6 ವರ್ಷದ ಒಳಗಿನ ಮಕ್ಕಳ, ಗರ್ಭಿಣಿ, ಬಾಣಂತಿ, ಮತ್ತು ಕಿಶೋರಿಯರ ಸರ್ವೋತೋಮುಖ ಅಭಿವೃದ್ಧಿಯು ಈ ಯೋಜನೆಯ ಮುಖ್ಯ ಗುರಿಯಾಗಿರುತ್ತದೆ.

ರಾಜ್ಯದಲ್ಲಿ 204 ಯೋಜನೆಗಳಡಿ ಸಮಗ್ರ ಶಿಶು ಅಭಿವೃದ್ಧಿ ಯೋಜನೆಯನ್ನು ಅನುಷ್ಠಾನಗೊಳಿಸಲಾಗುತ್ತಿದೆ. 69899 ಅಂಗನವಾಡಿ ಕೇಂದ್ರಗಳು ಕಾರ್ಯನಿರ್ವಹಿಸುತ್ತಿವೆ.

- ರಾಜ್ಯ ಸರ್ಕಾರದ ಕ್ಷೀರಭಾಗ್ಯ ಯೋಜನೆಯಡಿ 6 ತಿಂಗಳಿಂದ 6 ವರ್ಷದ ಎಲ್ಲಾ (ಸಾಮಾನ್ಯ) ಅಂಗನವಾಡಿ ಮಕ್ಕಳಿಗೆ ವಾರದಲ್ಲಿ 5 ದಿನ 150 ಮಿ.ಲೀ. ಹಾಲು ನೀಡಲಾಗುತ್ತಿದೆ.

- 6 ತಿಂಗಳಿಂದ 3 ವರ್ಷದ ತೀವ್ರ / ಸಾಧಾರಣ ಅಪೌಷ್ಟಿಕ ಮಕ್ಕಳಿಗೆ ವಾರದಲ್ಲಿ 3 ದಿನ ಮೊಟ್ಟೆ ಹಾಗೂ 3 ದಿನ 200 ಎಂ.ಎಲ್ ಹಾಲನ್ನು, ಮೊಟ್ಟೆ ಸ್ವೀಕರಿಸದಿರುವ ಮಕ್ಕಳಿಗೆ ವಾರದಲ್ಲಿ 6 ದಿನ ಹಾಲನ್ನು ನೀಡಲಾಗುತ್ತಿದೆ.

- 3 ವರ್ಷದಿಂದ 6 ವರ್ಷದ ತೀವ್ರ / ಸಾಧಾರಣ ಅಪೌಷ್ಟಿಕ ಮಕ್ಕಳಿಗೆ ವಾರದಲ್ಲಿ 5 ದಿನ ಮೊಟ್ಟೆ ಹಾಗೂ 3 ದಿನ 200 ಎಂ.ಎಲ್ ಹಾಲನ್ನು, ಮೊಟ್ಟೆ ಸ್ವೀಕರಿಸದಿರುವ ಮಕ್ಕಳಿಗೆ ವಾರದಲ್ಲಿ 6 ದಿನ ಹಾಲನ್ನು ನೀಡಲಾಗುತ್ತಿದೆ.

- ಮಾತೃಪೂರ್ಣ ಯೋಜನೆಯಡಿ ಗರ್ಭಿಣಿ ಮತ್ತು ಬಾಣಂತಿಯರಿಗೆ ಪ್ರತಿ ದಿನ ನೀಡಲಾಗುತ್ತಿರುವ ರೂ.21/- ರ ಮೌಲ್ಯದ ಆಹಾರದಲ್ಲಿ 40% ಪೌಷ್ಠಿಕಾಂಶ (RDA) ಒಳಗೊಂಡಿರುತ್ತದೆ. ಈ ಆಹಾರವು 1342 ಕ್ಯಾಲೋರಿಸ್, 41 ಗ್ರಾಂ ಪ್ರೋಟೀನ್ ಮತ್ತು 578 mg ಕ್ಯಾಲ್ಸಿಯಂ ಒಳಗೊಂಡ ಪೌಷ್ಠಿಕಾಂಶಯುಕ್ತ ಮಧ್ಯಾಹ್ನದ ಬಿಸಿಯೂಟವಾಗಿದ್ದು, ಅಂಗನವಾಡಿ ಕೇಂದ್ರದಲ್ಲಿಯೇ ಫಲಾನುಭವಿಗಳಿಗೆ ನೀಡಲಾಗುತ್ತಿದೆ. ಈ ಬಿಸಿಯೂಟದಲ್ಲಿ ಅನ್ನ, ಸಾಂಬಾರು, ಪಲ್ಯದ ಜೊತೆಗೆ ಬೇಯಿಸಿದ ಮೊಟ್ಟೆ, **200 ಎಂ.ಎಲ್. ಹಾಲು** ಮತ್ತು ಶೇಂಗಾಚಿಕ್ಕಿಯನ್ನು ನೀಡಲಾಗುತ್ತಿದೆ.

**<u>ಅಂಗನವಾಡಿ ಕೇಂದ್ರಗಳಿಗೆ ಕೆನೆಭರಿತ ಹಾಲಿನ ಪುಡಿ ಸರಬರಾಜು ಬಗ್ಗೆ:</u>**

- ರಾಜ್ಯದ ಅಂಗನವಾಡಿ ಕೇಂದ್ರಗಳ ಫಲಾನುಭವಿಗಳಿಗೆ ಅಗತ್ಯವಿರುವ ಕೆನೆಭರಿತ ಹಾಲಿನ ಪುಡಿಯನ್ನು ಕೆ.ಎಂ.ಎಫ್. ರವರು ಸರಬರಾಜು ಮಾಡುತ್ತಿದ್ದಾರೆ.
- ಕೆಲವು ತಿಂಗಳುಗಳಿಂದ ರಾಜ್ಯದ ಬಹುತೇಕ ಜಿಲ್ಲೆಗಳಲ್ಲಿ ಕೆ.ಎಂ.ಎಫ್. ರವರು ಅಂಗನವಾಡಿ ಕೇಂದ್ರಗಳ ಮಕ್ಕಳಿಗೆ, ಗರ್ಭಿಣಿ ಮತ್ತು ಬಾಣಂತಿ ಮಹಿಳೆಯರಿಗೆ ಅಗತ್ಯವಿರುವಷ್ಟು ಹಾಲಿನ ಪುಡಿಯನ್ನು ಸರಬರಾಜು ಮಾಡುತ್ತಿರುವುದಿಲ್ಲ. ಈ ಬಗ್ಗೆ ಈಗಾಗಲೇ ಕೆ.ಎಂ.ಎಫ್. ರವರೊಂದಿಗೆ ಹಲವಾರು ಬಾರಿ ಪತ್ರ ವ್ಯವಹಾರ ಮಾಡಲಾಗಿರುತ್ತದೆ.
- ಪ್ರಸ್ತುತದ ಸನ್ನಿವೇಶದಲ್ಲಿ, ಕರ್ನಾಟಕ ಹಾಲು ಮಹಾಮಂಡಳಿಯಲ್ಲಿ (ಕೆ.ಎಂ.ಎಫ್) ಹಾಲಿನ ಶೇಖರಣೆ ಕಡಿಮೆಯಾಗುತ್ತಿದ್ದು, ಅತೀ ಹೆಚ್ಚು ಹಾಲಿನ ಪುಡಿ ಬೇಡಿಕೆಯಿರುವ ಉತ್ತರ ಕರ್ನಾಟಕದ ಜಿಲ್ಲೆಗಳಲ್ಲಿ ಹಾಲಿನ ಪುಡಿ ಸರಬರಾಜು ಮಾಡಲು ಕಷ್ಟಸಾಧ್ಯವಾಗುತ್ತಿದೆ. ಮುಂದುವರೆದು ದಕ್ಷಿಣ ಕರ್ನಾಟಕ ಪ್ರದೇಶದ ಹಾಲು ಒಕ್ಕೂಟಗಳಿಂದ, ಬೇಡಿಕೆಯಿರುವ ಉತ್ತರ ಕರ್ನಾಟಕ ಪ್ರದೇಶದ ಹಾಲು ಒಕ್ಕೂಟಗಳ ವ್ಯಾಪ್ತಿಯ ಅಂಗನವಾಡಿಗಳಿಗೆ ಕೆನಭರಿತ ಹಾಲಿನ ಪುಡಿ ನೀಡಲು ಕಷ್ಟಸಾಧ್ಯವಿದೆಯೆಂದು ಕೆ.ಎಂ.ಎಫ್. ರವರು ತಿಳಿಸಿರುತ್ತಾರೆ.
- ಮುಂದುವರೆದು, ಕೆ.ಎಂ.ಎಫ್. ರವರು ತಮ್ಮಲ್ಲಿ ಹಾಲಿನ ಪುಡಿಯ ಕೊರತೆ ಇರುವುದರಿಂದ ಪ್ರಸ್ತುತ ಕೇವಲ ಅಂಗನವಾಡಿ ಕೇಂದ್ರಗಳಲ್ಲಿ ದಾಖಲಾಗುವ ಮಕ್ಕಳಿಗೆ ಮಾತ್ರ ಹಾಲಿನ ಪುಡಿಯನ್ನು ಸರಬರಾಜು ಮಾಡಲು ಸಾಧ್ಯವಿದೆ ಎಂದು ಮತ್ತು ಮಾತೃಪೂರ್ಣ ಯೋಜನೆಯಡಿಯ ಗರ್ಭಿಣಿ ಮತ್ತು ಬಾಣಂತಿ ಮಹಿಳೆಯರಿಗೆ ನೀಡಲಾಗುವ ಹಾಲಿಗೆ ಅಗತ್ಯವಿರುವ ಹಾಲಿನ ಪುಡಿಯನ್ನು ಸರಬರಾಜು ಮಾಡಲು ಸಾಧ್ಯವಿಲ್ಲವೆಂದು ಸಹ ತಿಳಿಸಿರುತ್ತಾರೆ. ಈ ಸಂಬಂಧ ಈಗಾಗಲೇ ದಿನಾಂಕ: 19/04/2023 ರಂದು ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರ ಅಧ್ಯಕ್ಷತೆಯಲ್ಲಿ ಕೆ.ಎಂ.ಎಫ್. ಸಂಸ್ಥೆಯೊಂದಿಗೆ ಸಭೆ ನಡೆಸಿ ಚರ್ಚಿಸಲಾಗಿರುತ್ತದೆ.
- ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರ ಅಧ್ಯಕ್ಷತೆಯಲ್ಲಿ ನಡೆದ ಸಭೆಯ ನಿರ್ಣಯದಂತೆ ಅಂಗನವಾಡಿ ಕೇಂದ್ರಗಳ ಮಕ್ಕಳಿಗೆ, ಗರ್ಭಿಣಿ ಮತ್ತು ಬಾಣಂತಿ ಮಹಿಳೆಯರಿಗೆ ಅಗತ್ಯವಿರುವಷ್ಟು ಹಾಲಿನ ಪುಡಿಯನ್ನು ಸರಬರಾಜು ಮಾಡಲು ಕೆ.ಎಂ.ಎಫ್. ರವರನ್ನು ಮತ್ತೊಮ್ಮೆ ಕೋರಲಾಗಿದ್ದರೂ ಸದರಿಯವರು ಸಮರ್ಪಕವಾಗಿ ಹಾಲಿನಪುಡಿಯನ್ನು ಸರಬರಾಜು ಮಾಡುತ್ತಿರುವುದಿಲ್ಲ.
- ಕೆ.ಎಂ.ಎಫ್. ರವರಿಂದ ಹಾಲಿನ ಪುಡಿ ಸರಬರಾಜಿನಲ್ಲಿ ಉಂಟಾಗಿರುವ ವ್ಯತ್ಯಯದಿಂದ ಫಲಾನುಭವಿಗಳ ಹಿತದೃಷ್ಟಿಯಿಂದ ಹಾಲಿನ ಪುಡಿ ಬದಲಿಗೆ ನಿಗದಿತ ಘಟಕ ವೆಚ್ಚದಲ್ಲಿಯೇ ಬೇರೆ ಪೌಷ್ಠಿಕ ಆಹಾರವನ್ನು ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿನ ಜಿಲ್ಲಾ ಮೇಲ್ವಿಚಾರಣಾ ಸಮಿತಿಯ ಅನುಮೋದನೆ ಪಡೆದು ವಿತರಿಸುವ ಬಗ್ಗೆ ಪರಿಶೀಲಿಸಲಾಗುತ್ತಿದೆ.

**ಮೊಬೈಲ್ /ದೂರವಾಣಿ ಹಾಗೂ ಸಮೀಕ್ಷೆ ಬಗ್ಗೆ:**

- ರಾಜ್ಯಾದ್ಯಂತ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಗಳಿಂದ ಆರೋಗ್ಯ ಮತ್ತು ಪೌಷ್ಠಿಕ ಸಮೀಕ್ಷೆಯನ್ನು ಜಂಟಿಯಾಗಿ ನಡೆಸಲು ಯೋಜಿಸಲಾಗಿರುತ್ತದೆ. ಸದರಿ ಸಮೀಕ್ಷೆಗೆ ಅಂಗನವಾಡಿ ಕಾರ್ಯಕರ್ತೆಯರಿಗೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಿಂದ ರೂ.250/- ಗಳನ್ನು ಹಾಗೂ ಇ-ಗವರ್ನೆನ್ಸ್ ಇಲಾಖೆಯಿಂದ ರೂ.250/- ಗಳು ಸೇರಿದಂತೆ ಒಟ್ಟು ರೂ 500/- ನ್ನು ಪ್ರೋತ್ಸಾಹಧನ ನೀಡಲು ಪರಿಶೀಲಿಸಲಾಗುತ್ತಿದೆ.

- ಹಾಲಿ ಬಳಸಲಾಗುತ್ತಿರುವ Smartphone ಗಳನ್ನು 2019-20 ರಲ್ಲಿ ಖರೀದಿಸಿ ವಿತರಿಸಲಾಗಿದ್ದು, Internal Storage ಮತ್ತು Capacity ತುಂಬಾ ಕಡಿಮೆ ಇರುವುದರಿಂದ ಪೋಷಣ್ ಟ್ರ್ಯಾಕರ್‌ನಲ್ಲಿ ಫಲಾನುಭವಿಗಳ ಮಾಹಿತಿಯನ್ನು ಅಳವಡಿಸುವುದರೊಂದಿಗೆ, ಆರೋಗ್ಯ ಮತ್ತು ಪೌಷ್ಠಿಕತೆ ಸಮೀಕ್ಷೆ, ಇತರೆ ಇಲಾಖೆಗಳ survey ಕೆಲಸಗಳನ್ನು Online ಮೂಲಕ Entry ಮಾಡಬೇಕಾಗಿರುವುದರಿಂದ ಸದರಿ capacity ಯ Smartphone ಗಳನ್ನು ಬಳಸಲು ಸಾಧ್ಯವಾಗುತ್ತಿಲ್ಲ.

- ಇದರಿಂದ ಅಂಗನವಾಡಿ ಕಾರ್ಯಕರ್ತೆಯರು Smartphone ಗಳಲ್ಲಿ ಮಾಹಿತಿಯನ್ನು ಅಳವಡಿಸಲು ಕಷ್ಟಕರವಾಗಿರುವುದರಿಂದ Smartphone ಗಳನ್ನು ಹಿಂದಿರುಗಿಸುವುದಾಗಿ ತಿಳಿಸಿರುತ್ತಾರೆ.

- ದಿನಾಂಕ:-28.03.2023ರಂದು ಕೇಂದ್ರ ಸರ್ಕಾರವು Smartphones ಖರೀದಿಸಲು ಹೊಸ Specification ಒದಗಿಸಿ, ಅಗತ್ಯವಿರುವ Smartphones ಖರೀದಿಸಲು ಪ್ರಸ್ತಾವನೆ ಸಲ್ಲಿಸಲು ಸೂಚಿಸಿರುತ್ತದೆ. ಅದರಂತೆ ದಿನಾಂಕ: 11.04.2023 ರಂದು 75938 Smartphones ಖರೀದಿಸಲು ಅನುದಾನ ಒದಗಿಸಲು ಕೋರಿ ಕೇಂದ್ರ ಸರ್ಕಾರಕ್ಕೆ ಪತ್ರ ಬರೆಯಲಾಗಿದೆ. ಈವರೆಗೆ ಕೇಂದ್ರ ಸರ್ಕಾರದಿಂದ ಅನುದಾನ ಬಿಡುಗಡೆಯಾಗಿರುವುದಿಲ್ಲ.

- ಪ್ರಸ್ತುತ ಒಂದು Smartphones ಖರೀದಿಸಲು ರೂ.8,000/-ಗಳ ಘಟಕ ವೆಚ್ಚವನ್ನು ನಿಗದಿಪಡಿಸಲಾಗಿದೆ. ಆದರೆ ಸದರಿ ಘಟಕ ವೆಚ್ಚದಲ್ಲಿ ಕೇಂದ್ರ ಸರ್ಕಾರ ಒದಗಿಸಿರುವ Specification ಪ್ರಕಾರ Smartphones ಖರೀದಿಸಲು ಸಾಧ್ಯವಿರದ ಕಾರಣ ಘಟಕ ವೆಚ್ಚವನ್ನು ಹೆಚ್ಚಿಸುವಂತೆ ಕೋರಿ ಅಡಕಗಳೊಂದಿಗೆ ಹಾಗೂ ಅಂಗನವಾಡಿ ಕಾರ್ಯಕರ್ತೆಯರಿಗೆ Survey ಕಾರ್ಯಗಳನ್ನು ನಿರ್ವಹಿಸಬೇಕಾಗುವ ಗುಣಮಟ್ಟದ Smartphone ಗಳನ್ನು ಖರೀದಿಸಲು ದಿನಾಂಕ: 13-06-2023ರಂದು ಕೇಂದ್ರ ಸರ್ಕಾರಕ್ಕೆ ಪತ್ರ ಬರೆಯಲಾಗಿದೆ. ಕೇಂದ್ರ ಸರ್ಕಾರದಿಂದ ಅನುಮೋದನೆ ದೊರೆತ ನಂತರ ಹೊಸ Smartphone ಖರೀದಿಸಿ ಒದಗಿಸಲು ಅಗತ್ಯ ಕ್ರಮ ವಹಿಸಲಾಗುವುದು.

**ಸಂಖ್ಯೆ: ಮಮಇ 138 ಐಸಿಡಿ 2023**

**(ಲಕ್ಷ್ಮೀ ಆರ್. ಹೆಬ್ಬಾಳಕರ್)**
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ
ವಿಕಲಚೇತನರ ಹಾಗೂ ಹಿರಿಯ ನಾಗರಿಕರ
ಸಬಲೀಕರಣ ಸಚಿವರು.